ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012. ದೂರವಾಣಿ: 080–23460460 (5 ಲೈನ್ಸ್),
ಇ–ಮೇಲ್: **keauthority-ka@nic.in** ವೆಬ್‌ಸೈಟ್: **https://cetonline.karnataka.gov.in/kea**

**ಸಂಖ್ಯೆ: ಇಡಿ/ಕೆಇಎ/ಡಿಸಿಇಟಿ/ಸಿ.ಆರ್–01/2026** **ದಿನಾಂಕ: 16–03–2026**

## ಡಿಪ್ಲೊಮಾ ಅಭ್ಯರ್ಥಿಗಳಿಗೆ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ ಇಂಜಿನಿಯರಿಂಗ್ ಕೋರ್ಸುಗಳ ಪ್ರವೇಶಕ್ಕೆ ಡಿಪ್ಲೊಮಾ ಸಾಮಾನ್ಯ ಪ್ರವೇಶ ಪರೀಕ್ಷೆ–2026

**(ವೃತ್ತಿಪರ ಡಿಪ್ಲೊಮಾ ಪದವೀಧರ (Working Professionals) ಅಭ್ಯರ್ಥಿಗಳೂ ಸೇರಿದಂತೆ)**

1) ಸರ್ಕಾರದ ಆದೇಶ ಸಂಖ್ಯೆ. ಇಡಿ 88 ಡಿಟಿಇ 2022 ಬೆಂಗಳೂರು ದಿನಾಂಕ: 14–07–2022 ರಲ್ಲಿ ಮೂರು ವರ್ಷಗಳ ಡಿಪ್ಲೋಮಾ ಇಂಜಿನಿಯರಿಂಗ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿ ಅರ್ಹತೆಯನ್ನು ಪಡೆದಿರುವ ಅಭ್ಯರ್ಥಿಗಳು ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ ಇಂಜಿನಿಯರಿಂಗ್ ಕೋರ್ಸುಗಳಿಗೆ ನೇರವಾಗಿ ಯಾವುದೇ ಇಂಜಿನಿಯರಿಂಗ್ ಕೋರ್ಸುಗಳನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.
2) ಮುಂದುವರಿದು ಸರ್ಕಾರದ ಆದೇಶ ಸಂಖ್ಯೆ ಇಡಿ 137 ಡಿಟಿಇ 2023 ಬೆಂಗಳೂರು ದಿನಾಂಕ 12–12–2023 ರಲ್ಲಿ, ವೃತ್ತಿಪರ ಡಿಪ್ಲೊಮಾ ಪದವೀಧರ (Working Professional) ಅಭ್ಯರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷ / 3ನೇ ಸೆಮಿಸ್ಟರ್ ಇಂಜಿನಿಯರಿಂಗ್ ಕೋರ್ಸುಗಳಿಗೆ ಪ್ರವೇಶಾತಿ ನೀಡಲು ಆದೇಶಿಸಲಾಗಿದೆ. (ನೀಡಲಾಗುವ ಸೀಟ್ ಮ್ಯಾಟ್ರಿಕ್ಸ್ ನೀಡಿಕೆಗೆ ಒಳಪಟ್ಟು).
3) ಸರ್ಕಾರದ ಆದೇಶದ ಅನ್ವಯ 2026–27ನೇ ಸಾಲಿಗೆ ಪ್ರಾಧಿಕಾರವು ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ **"ಇಂಜಿನಿಯರಿಂಗ್ ಕಾಲೇಜುಗಳ"** ಪ್ರವೇಶಾತಿಗೆ ಅರ್ಹ ಡಿಪ್ಲೊಮಾ ಅಭ್ಯರ್ಥಿಗಳಿಂದ ಹಾಗೂ ಆಸಕ್ತಿಯುಳ್ಳ ವೃತ್ತಿಪರ ಡಿಪ್ಲೊಮಾ ಪದವೀಧರ (Working Professional) ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.
4) ಅಭ್ಯರ್ಥಿಗಳು, ಲ್ಯಾಟರಲ್ ಎಂಟ್ರಿ ಮೂಲಕ ಇಂಜಿನಿಯರಿಂಗ್ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಹತೆ ಪಡೆಯಲು, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ 2026ರ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬೇಕು ಹಾಗೂ ವೃತ್ತಿಪರ ಡಿಪ್ಲೋಮಾ ಪದವೀಧರ (Working Professional) ಅಭ್ಯರ್ಥಿಗಳೂ ಸಹ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬೇಕು.
5) ಆರ್ಕಿಟೆಕ್ಚರ್ ಪ್ರವೇಶಕ್ಕೆ ಕೌನ್ಸಿಲ್ ಆಫ್ ಆರ್ಕಿಟೆಕ್ಚರ್ ರವರು ನಡೆಸಿದ NATA-2026 ಪರೀಕ್ಷೆಗೆ ಹಾಜರಾಗಿ ಮಾನ್ಯವಾದ NATA ಅಂಕಗಳನ್ನು ಹೊಂದಿರಬೇಕು ಮತ್ತು ಕಡ್ಡಾಯವಾಗಿ ಆನ್‌ಲೈನ್ ಮೂಲಕ ನೊಂದಣಿ ಮಾಡಿ ಅರ್ಜಿಸಲ್ಲಿಸಿ ಶುಲ್ಕವನ್ನು ಪಾವತಿಸಬೇಕು.
6) ವೃತ್ತಿಪರ ಡಿಪ್ಲೊಮಾ ಪದವೀಧರ (Working Professional) ಅಭ್ಯರ್ಥಿಗಳಿಗೆ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರವೇಶವು ಸರ್ಕಾರವು ನೀಡುವ ಸೀಟ್ ಮ್ಯಾಟ್ರಿಕ್ಸ್ ಅನ್ನು ಆಧರಿಸಿರುತ್ತದೆ.
7) **ಶೈಕ್ಷಣಿಕ ವಿದ್ಯಾರ್ಹತೆ:** ಮೇಲಿನ ಎಲ್ಲಾ ಕೋರ್ಸುಗಳ ಪ್ರವೇಶಕ್ಕೆ ವಿವರವಾದ ಅರ್ಹತೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ **https://cetonline.karnataka.gov.in/kea** ಪ್ರಕಟಿಸಲಾಗಿದೆ. ಅಭ್ಯರ್ಥಿಗಳು, ಯಾವುದೇ ಕೋರ್ಸಿಗೆ ಅರ್ಜಿ ಸಲ್ಲಿಸುವ ಮೊದಲು ಅರ್ಹತಾ ವಿವರವನ್ನು ಪರಿಶೀಲಿಸಲು ಕೋರಲಾಗಿದೆ.
8) **ಪಠ್ಯಕ್ರಮ:** ಕಾಲೇಜು ತಾಂತ್ರಿಕ ಶಿಕ್ಷಣ ಇಲಾಖೆಯಿಂದ ನೀಡಿರುವ ಡಿಸಿಇಟಿ – 2026 ರ ಪರೀಕ್ಷೆಯ ಪಠ್ಯಕ್ರಮಗಳನ್ನು (ಡಿಟಿಇ 39 ಸಿಡಿಸಿ (1) 2024 – 28–01–2026) ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ. (ಎಲ್ಲಾ ಡಿಪ್ಲೋಮಾ ವಿಭಾಗಗಳಿಗೆ ಸಾಮಾನ್ಯವಾದದು)
9) ಸರ್ಕಾರದ ಆದೇಶ ಸಂಖ್ಯೆ: **ED 155 TEC 2022 dated 19.04.2025** the Karnataka selection of candidate for Admission to Government Seats in Professional Educational Institutions (Amendment) rules, 2022 ಅನ್ವಯ "ಶೆಡ್ಯೂಲ್–1" ರಲ್ಲಿ **1. Dip NTTF (Tool and Dye Making) & 2. Dip NTTF (Electronics)** ಅನ್ನು ತೆಗೆದು ಹಾಕಲಾಗಿದೆ.

| | | |
|---|---|---|
| i | ನೋಂದಣಿ ಹಾಗೂ ಆನ್‌ಲೈನ್ ಮೂಲಕ ಅರ್ಜಿ (application-cum-verification module) ಸಲ್ಲಿಸಲು ಪ್ರಾರಂಭಿಕ ದಿನಾಂಕ | **17–03–2026 ರ ಅಪರಾಹ್ನ 12.00 ರಿಂದ** |
| ii | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **03–04–2026 ರ ರಾತ್ರಿ 11.59 ರವರೆಗೆ** |
| iii | ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **04–04–2026 ರ ಸಂಜೆ 6.00 ರವರೆಗೆ** |
| iv | ಪ್ರವೇಶ ಪತ್ರವನ್ನು ಪ್ರಾಧಿಕಾರದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡುವುದು | **07–05–2026 ರ ನಂತರ** |

**ಡಿಸಿಇಟಿ–2026 ರ ಪರೀಕ್ಷಾ ವೇಳಾಪಟ್ಟಿ**

| ದಿನಾಂಕ / ದಿನ | ಪಠ್ಯಕ್ರಮ (ಎಲ್ಲಾ ಇಂಜಿನಿಯರಿಂಗ್ ಡಿಪ್ಲೋಮಾ ಪ್ರೋಗ್ರಾಂಗಳಿಗೆ) | ಸಮಯ | ಅಂಕಗಳು |
|---|---|---|---|
| **23–05–2026 ಶನಿವಾರ** | a) Engineering Mathematics<br>b) Statistics & Analytics<br>c) IT Skills<br>d) Fundamentals of Electrical and Electronics Engineering<br>e) Project Management Skills | **ಮಧ್ಯಾಹ್ನ 2.00 ರಿಂದ ಸಂಜೆ 5.00 ರವರೆಗೆ** | **100** |
| | ವಿವರಣಾತ್ಮಕ ಕನ್ನಡ ಭಾಷಾ ಪರೀಕ್ಷೆ (4ನೇ ತರಗತಿ ಮಟ್ಟ) – ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ (ಪರೀಕ್ಷಾ ಕೇಂದ್ರ ಬೆಂಗಳೂರಿನಲ್ಲಿ ಮಾತ್ರ) | **ಬೆಳಿಗ್ಗೆ 10.30 ರಿಂದ 11.30 ರವರೆಗೆ** | **50** |

**ಸೂಚನೆ:**

ಆನ್‌ಲೈನ್ ಅರ್ಜಿ ಸಲ್ಲಿಸುವಿಕೆಯನ್ನು application-cum-verification module ಆಗಿ ಸಿದ್ಧಪಡಿಸಲಾಗಿದೆ. ಅಭ್ಯರ್ಥಿಗಳು ದಾಖಲಿಸುವ ವಿವರಗಳನ್ನು ಅಂದರೆ, ಶಾಲಾ ವ್ಯಾಸಂಗ, ಕನ್ನಡ ಮಾಧ್ಯಮ, ಜಾತಿ / ಪ್ರವರ್ಗ, ವಾರ್ಷಿಕ ಆದಾಯ ಮುಂತಾದ ವಿವರಗಳನ್ನು SATS ಹಾಗೂ ಕಂದಾಯ ಇಲಾಖೆಯ ವೆಬ್‌ಸರ್ವೀಸ್ ಮುಖಾಂತರ ಆನ್‌ಲೈನ್ ಮೂಲಕವೇ ಪರಿಶೀಲಿಸಲಾಗುವುದು.

**ವಿಶೇಷ ಸೂಚನೆ:** ಹೆಚ್ಚಿನ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್ **(https://cetonline.karnataka.gov.in/kea/)** ಗೆ ಭೇಟಿ ನೀಡಲು ಸೂಚಿಸಿದೆ.

**ಸಹಿ/–**
**(ಹೆಚ್. ಪ್ರಸನ್ನ, ಭಾ.ಆ.ಸೇ)**
**ಕಾರ್ಯನಿರ್ವಾಹಕ ನಿರ್ದೇಶಕರು**

ವಾಸಾಸಂಇ/ವಾ.ಪ್ರ/6299/2025–26

**Size: 12x28cm**